All India Radio: Bangalore
Regional Bulletin In Kannada
24.11.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಬದಲಾವಣೆ ವಿಚಾರ; ಹೈಕಮಾಂಡ್ ನಿರ್ಧಾರಕ್ಕೆ ಬದ್ಧ - ಮುಖ್ಯಮಂತ್ರಿ ಸಿದ್ದರಾಮಯ್ಯ

- ಮಲೆನಾಡಿನಲ್ಲಿ ಕಾಳಿಂಗ ಸರ್ಪ ಹಿಡಿಯಲು ವಿಶೇಷ ತಂಡ ರಚಿಸುವಂತೆ ಸಚಿವ ಈಶ್ವರ್ ಖಂಡ್ರೆ ಸೂಚನೆ

- ಉಡುಪಿಗೆ ಇದೇ ೨೮ ರಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ಸಿದ್ಧತೆ ಪರಿಶೀಲನೆ ನಡೆಸಿದ ಜಿಲ್ಲಾಡಳಿತ

- 'ಜಲ ಸಿಂಚಾಯಿ ಜನ ಭಾಗಿದಾರಿ' ಅಭಿಯಾನದಡಿ ಮಂಡ್ಯ ಜಿಲ್ಲೆಗೆ ರಾಷ್ಟ್ರೀಯ ಪ್ರಶಸ್ತಿ

<>><><*><><<>

ಅಧಿಕಾರ ಹಂಚಿಕೆ ಕುರಿತಂತೆ ಪಕ್ಷದ ವರಿಷ್ಠರ ತೀರ್ಮಾನಕ್ಕೆ ತಾವು ಹಾಗೂ ಡಿ.ಕೆ.ಶಿವಕುಮಾರ್ ಬದ್ಧರಾಗಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದ ಶಿಡ್ಲಘಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದು ಪುನರುಚ್ಚರಿಸಿದ್ದಾರೆ. ಹೈಕಮಾಂಡ್ ಸೂಚನೆಯಂತೆ ಸಂಪುಟ ವಿಸ್ತರಣೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ( 26 ಸೆಕೆಂಡ್ಸ್)

ಗ್ಯಾರಂಟಿ ಯೋಜನೆಗಳಿಗೆ ಹಣ ಇಲ್ಲ ಎಂದು ಬಿಜೆಪಿ ನಾಯಕರು ಸುಳ್ಳು ಹೇಳುತ್ತಿದ್ದಾರೆ. ಆದರೆ, ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ. ೨ ಸಾವಿರ ಕೋಟಿ ವೆಚ್ಚದ ಅಭಿವೃದ್ಧಿ ಕೆಲಸಗಳನ್ನು

ಹಣವಿಲ್ಲದೆ ಮಾಡಲು ಸಾಧ್ಯವೆ ಎಂದು ಪ್ರಶ್ನಿಸಿದ್ದಾರೆ. ರಾಜ್ಯದ ಅಭಿವೃದ್ಧಿಗೆ ಕಾಂಗ್ರೆಸ್ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

ಮಲೆನಾಡಿನಲ್ಲಿ ಹೆಚ್ಚಾಗಿ ಕಂಡುಬರುವ ಕಾಳಿಂಗ ಸರ್ಪಗಳನ್ನು ಸುರಕ್ಷಿತವಾಗಿ ಸೆರೆ ಹಿಡಿಯಲು ಮತ್ತು ಕಾಡಿಗೆ ಬಿಡಲು ಅರಣ್ಯ ಇಲಾಖೆಯ ಸಿಬ್ಬಂದಿಗೆ ತರಬೇತಿ ನೀಡಿ, ವಿಶೇಷ ತಂಡ ರಚಿಸುವಂತೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ. ಚಿಕ್ಕಮಗಳೂರಿನಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳ ಜೊತೆ ನಡೆಸಿದ ಸಭೆಯಲ್ಲಿ, ಈ ವಿಶೇಷ ತಂಡದ ಮೂಲಕ ಕಾಳಿಂಗ ಸರ್ಪಗಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟಬಹುದು ಎಂದು ಹೇಳಿದ್ದಾರೆ. ಅರಣ್ಯ ಇಲಾಖೆಯ ಐದು ಸಿಬ್ಬಂದಿಗೆ ಈ ಕುರಿತಂತೆ ತರಬೇತಿ ನೀಡುವಂತೆ ನಿರ್ದೇಶನ ನೀಡಿದ್ದಾರೆ. ಚಿಕ್ಕಮಗಳೂರು, ಉತ್ತರಕನ್ನಡ, ಶಿವಮೊಗ್ಗ, ಉಡುಪಿ ಭಾಗದಲ್ಲಿ ಕಾಳಿಂಗ ಸರ್ಪಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಸಾರ್ವಜನಿಕರಲ್ಲಿ ಭಯ ಮೂಡುತ್ತಿದೆ. ಈ ಹಿನ್ನೆಲೆಯಲ್ಲಿ ಒಬ್ಬ ಪ್ರಾದೇಶಿಕ ಅರಣ್ಯ ಅಧಿಕಾರಿಯೊಂದಿಗೆ ತರಬೇತಿ ಪಡೆದ ಐದು ಜನರ ತಂಡವನ್ನು ನೇಮಿಸುವಂತೆ ತಿಳಿಸಿದ್ದಾರೆ.

<>><><*><><<>

ಕಾಡು ಸಂರಕ್ಷಣೆ ಮತ್ತು ಅರಣ್ಯ ರಕ್ಷಕರ ಭದ್ರತೆ ಎಂಬ ಎರಡು ಮಹತ್ವದ ಜವಾಬ್ದಾರಿಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಮೈಸೂರು ಎಲೆಕ್ಟ್ರಿಕಲ್ಸ್ ಲಿಮಿಟೆಡ್ ಸಂಸ್ಥೆಯು ಕಾಡಿನ ಒಳಭಾಗದಲ್ಲೇ ಅರಣ್ಯ ರಕ್ಷಕರಿಗಾಗಿ ವಿಶೇಷ ರಕ್ಷಣಾ ಚೌಕಿಯನ್ನು ನಿರ್ಮಿಸಿದೆ. ಕಾಡಿನ ಪರಿಸರವನ್ನು ಕಾಪಾಡಲು ಶ್ರಮಿಸುವ ಅರಣ್ಯ ರಕ್ಷಕರಿಗೆ ಸುರಕ್ಷಿತ ಕಾರ್ಯಪರಿಧಿ ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಈ ಚೌಕಿಯಿಂದ ಗಸ್ತು ವ್ಯವಸ್ಥೆ ಬಲಪಡಿಸುವುದು, ವನ್ಯಜೀವಿ ಸಂರಕ್ಷಣೆ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡುವುದು ಹಾಗೂ ಕಾಡಿನಲ್ಲಿ ಸಂಭವಿಸುವ ಅಕ್ರಮ ಚಟುವಟಿಕೆಗಳನ್ನು ತಡೆಯಲು ನೆರವಾಗುವುದು. ಮಾನವ-ಪ್ರಕೃತಿ ಸಹಜೀವನಕ್ಕೆ ಬಲವರ್ಧಕವಾದ ಹೆಜ್ಜೆ ಇಡಲಾಗುತ್ತಿದೆ.

<>><><*><><<>

ಇದೇ ೨೮ ರಂದು ಪ್ರಧಾನಿ ನರೇಂದ್ರ ಮೋದಿ ಅವರು, ಉಡುಪಿಗೆ ಭೇಟಿ ನೀಡಲಿದ್ದಾರೆ. ಉಡುಪಿ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಲಿರುವ ಪ್ರಧಾನಿಯವರು ಶ್ರೀಕೃಷ್ಣನ ದರ್ಶನ ಪಡೆಯಲಿದ್ದಾರೆ. ಬಳಿಕ ಅವರು, ಐತಿಹಾಸಿಕ ಲಕ್ಷ ಕಂಠ ಗೀತಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿ ಭೇಟಿ ಹಿನ್ನೆಲೆಯಲ್ಲಿ ಉಡುಪಿಯಲ್ಲಿ ಸಿದ್ಧತೆ ಹಾಗೂ ಭದ್ರತೆಯನ್ನು ಹೆಚ್ಚಿಸಲಾಗಿದೆ. ಇಂದು ಜಿಲ್ಲಾಧಿಕಾರಿ ಸ್ವರೂಪ. ಟಿ.ಕೆ. ಆದಿ ಉಡುಪಿ ಹೆಲಿಪ್ಯಾಡ್ ಮತ್ತು ಕಾರ್ಯಕ್ರಮ ನಡೆಯುವ ಸ್ಥಳದ ಪರಿಶೀಲನೆ ನಡೆಸಿದರು.

<>><><*><><<>

ಜಲ ಶಕ್ತಿ ಅಭಿಯಾನದ ಅಂಗವಾಗಿ "ಜಲ ಸಂಚಾಯಿ ಜನ ಭಾಗಿದಾರಿ ಅಭಿಯಾನದಡಿ ಮಂಡ್ಯ ಜಿಲ್ಲೆಯು ಜಲ ಸಂರಕ್ಷಣೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ್ದಕ್ಕಾಗಿ ಮಂಡ್ಯ ಜಿಲ್ಲೆಗೆ ರಾಷ್ಟ್ರೀಯ ಪ್ರಶಸ್ತಿ ದೊರೆತಿದೆ. ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆದ 'ರಾಷ್ಟ್ರೀಯ ಜಲ ಪ್ರಶಸ್ತಿ' ಪ್ರದಾನ ಸಮಾರಂಭದಲ್ಲಿ ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್.ಪಾಟೀಲ್ ಮಂಡ್ಯ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ಜಿಲ್ಲೆಯಲ್ಲಿ ಸಮುದಾಯ ಕಾಮಗಾರಿಗಳಾದ ಬದು ನಿರ್ಮಾಣ, ಬೋರ್ ವೆಲ್ ರೀಚಾರ್ಜ್, ಸಮಗ್ರ ಕೆರೆ ಅಭಿವೃದ್ಧಿ, ಕರೆ-ಕಟ್ಟೆಗಳ ಅಭಿವೃದ್ಧಿ, ಕಲ್ಯಾಣಿಗಳ ಜಿರ್ಣೋದ್ಧಾರ, ಮಳೆ ನೀರು ಕೊಯ್ಲು, ತೆರೆದ ಬಾವಿ, ನಾಲಾ ಹೊಳೆತ್ತುವುದು ಸೇರಿದಂತೆ ಚೆಕ್ ಡ್ಯಾಂ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ.

<>><><*><><<>

ಬೆಂಗಳೂರು ನಗರ ವಿಶ್ವವಿದ್ಯಾನಿಲಯವು “ಭಾಷೆ, ಸಂಸ್ಕೃತಿ ಮತ್ತು ಜಾಗತಿಕ ಶಾಂತಿ: ಶಾಂತಿಯುತ ಜಗತಿಗಾಗಿ ಸಂವಾದ” ಎಂಬ ಅಂತರರಾಷ್ಟ್ರೀಯ ಸಮ್ಮೇಳನವನ್ನು ಇದೇ ೨೭ ಮತ್ತು ೨೮ರಂದು ಆಯೋಜಿಸಿದೆ.

ಈ ಎರಡು ದಿನಗಳ ಸಮ್ಮೇಳನವು ಭಾಷೆ, ಸಂಸ್ಕೃತಿ ಮತ್ತು ಶಾಂತಿ ನಡುವಿನ ಸಂಬಂಧಗಳ ಹಲವು ಆಯಾಮಗಳ ಬಗ್ಗೆ ಚರ್ಚಿಸಲಿದೆ. ಜಾಗತಿಕ ಮಟ್ಟದಲ್ಲಿ ಅರಿವು, ಪರಸ್ಪರ ಗೌರವ ಮತ್ತು ಸಹಕಾರವನ್ನು ಹೆಚ್ಚಿಸುವಲ್ಲಿ ಭಾಷಾ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯ ಮಹತ್ವವನ್ನು ಎತ್ತಿಹಿಡಿಯುವುದು ಈ ಸಮ್ಮೇಳನದ ಮುಖ್ಯ ಗುರಿಯಾಗಿದೆ. ಸಮ್ಮೇಳನದಲ್ಲಿ ಜಾಗತಿಕ ಖ್ಯಾತಿಯ

ಸಂಶೋಧಕರು, ಶಿಕ್ಷಕರು, ಶಾಂತಿ ಕಾರ್ಯಕರ್ತರು ಮತ್ತು ಭಾಷಾ ತಜ್ಞರು ಭಾಗವಹಿಸಲಿದ್ದು, ಪ್ರಮುಖ ಭಾಷಣಗಳು, ಸಂಶೋಧನಾ ಲೇಖನಗಳ ಪ್ರಸ್ತುತೀಕರಣ ಹಾಗೂ ಕಾರ್ಯಾಗಾರಗಳು ನಡೆಯಲಿವೆ.

<>><><*><><<>

ಮೈಸೂರಿನ ಗಾನಭಾರತಿ, ವೀಣೆ ಶೇಷಣ್ಣ ಭವನದಲ್ಲಿ ನಿನ್ನೆ ಹಮ್ಮಿಕೊಳ್ಳಲಾಗಿದ್ದ ೬೭ನೇ ಆಕಾಶವಾಣಿ ಸಂಗೀತ ಸಮ್ಮೇಳನ ೨೦೨೫ಕ್ಕೆ ಮೈಸೂರು ಆಕಾಶವಾಣಿ ದಕ್ಷಿಣ ವಲಯದ ನಿರ್ದೇಶಕ ಕೆ.ಪಿ.ಸಂಜೀವ್ ಹಾಗೂ ಬೆಂಗಳೂರು ದೂರದರ್ಶನ ಮುಖ್ಯಸ್ಥ ಭಾಗ್ಯವಾನ್ ಚಾಲನೆ ನೀಡಿದರು. ಸಂಗೀತ ಸಮ್ಮೇಳನದಲ್ಲಿ ಶಾಸ್ತ್ರೀಯ ಸಂಗೀತ, ವಿದ್ವಾನ್ ಎಚ್.ಎಲ್. ಶಿವಶಂಕರ ಸ್ವಾಮಿ ಅವರ ಮೃದಂಗ ಕಾರ್ಯಕ್ರಮ ಹಾಗೂ ಡಾ.ಎಸ್.ವಿ. ಸಹನಾ ವೀಣಾವಾದನ ನಡೆಸಿಕೊಟ್ಟರು. ದೇಶದ ೨೪ ಕಡೆ ನವೆಂಬರ್ ೨ ರಿಂದ ೨೯ ರವರೆಗೆ ಮೇಳ ಆಯೋಜಿಸಲಾಗಿದೆ.

<>><><*><><<>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಇದೇ ೨೯ ರಿಂದ ಡಿಸಂಬರ್ ೫ ರವರೆಗೆ ದತ್ತಜಯಂತಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಪೊಲೀಸ್ ಮಹಾ ನಿರ್ದೇಶಕ ಡಾ.ಸಲೀಂ ಚಿಕ್ಕಮಗಳೂರು ನಗರಕ್ಕೆ ಭೇಟಿ ನೀಡಿ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ಬಾರಿ ವಿಶ್ವಹಿಂದೂ ರಿಷತ್ ಭಜರಂಗದಳ, ಶ್ರೀರಾಮ ಸೇನೆ ಒಟ್ಟಾಗಿ ದತ್ತ ಜಯಂತಿ ಆಚರಿಸುವುದರಿಂದ ಭಕ್ತರ ಸಂಖ್ಯೆ ಕೂಡ ಹೆಚ್ಚಾಗಲಿದೆ. ಹೆಚ್ಚಿನ ಭದ್ರತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಡಿಸಂಬರ್ ೧ ರಿಂದ ೬ ರವರೆಗೆ ದತ್ತಪೀಠ, ಮುಳ್ಳಯ್ಯನಗಿರಿಗೆ ಪ್ರವಾಸಿಗರ ಭೇಟಿ ನಿಷೇಧಿಸಲಾಗಿದೆ. ಡಿಸಂಬರ್ ೩ ರಂದು ಚಿಕ್ಕಮಗಳೂರು ನಗರದಲ್ಲಿ ಶೋಭಾಯಾತ್ರೆ ನಡೆಯಲಿದೆ. ಭದ್ರತಾ ದೃಷ್ಠಿಯಿಂದ ಜಿಲ್ಲೆಯ ಸೂಕ್ಷ್ಮ ಸ್ಥಳಗಳು ಹಾಗೂ ಗಡಿ ಭಾಗದಲ್ಲಿ ಚೆಕ್ ಪೋಸ್ಟ್‌ಗಳ ಸ್ಥಾಪನೆ, ಸಿ.ಸಿ ಟಿ.ವಿ ಅಳವಡಿಕೆ, ವೀಡಿಯೋ ಚಿತ್ರೀಕರಣ ಸೇರಿ ಹಲವು ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

<>><><*><><<>

ಚಾಮರಾಜನಗರದಲ್ಲಿ ಜಿಲ್ಲಾ ಪೊಲೀಸರ ವತಿಯಿಂದ ಆಯೋಜಿಸಲಾಗಿದ್ದ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಶಿಲ್ಪನಾಗ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಶಿಲ್ಪನಾಗ್,

ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಹಗಲಿರುಳು ಶ್ರಮಿಸುವ ಪೊಲೀಸರು ತಮ್ಮ ಹಾಗೂ ತಮ್ಮ ಕುಟುಂಬದ ಆರೋಗ್ಯ ನಿರ್ಲಕ್ಷಿಸಬಾರದು ಎಂದು ಕಿವಿಮಾತು ಹೇಳಿದ್ದಾರೆ.

ಪ್ರತಿದಿನ ಉತ್ಸಾಹದಿಂದ ಕಾರ್ಯನಿರ್ವಹಿಸಲು ಆರೋಗ್ಯ ಮುಖ್ಯವಾಗಿದ್ದು, ಕರ್ತವ್ಯದ ಜೊತೆಗೆ ತಮ್ಮ ಆರೋಗ್ಯಕ್ಕೂ ಹೆಚ್ಚಿನ ಮಹತ್ವ ನೀಡುವಂತೆ ಸಲಹೆ ನೀಡಿದ್ದಾರೆ.

<>><><*><><<>

ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಅಬ್ಬೇನಹಳ್ಳಿ ಸೇತುವೆ ಬಳಿ ಅಪಘಾತ ಸಂಭವಿಸಿದ್ದು, ಚೆನ್ನೈ ಮೂಲದ ನಾಲ್ವರು ಮೃತಪಟ್ಟಿದ್ದಾರೆ. ನಿದ್ರೆ ಮಂಪರಿನಲ್ಲಿದ್ದ ಚಾಲಕನ ನಿಯಂತ್ರಣ ತಪ್ಪಿ ಕಾರು ಸೇತುವೆಯಿಂದ ಬಿದ್ದಿದೆ. ಚೆನ್ನೈ-ಬೆಂಗಳೂರು ಕಾರಿಡಾರ್ ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದೆ. ಮಾಲೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

<>><><*><><<>

ಮಾಯಕೊಂಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಗತ್ಯ ಇರುವ ೪೪ ಹೊಸ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ. ದಾವಣಗೆರೆ ತಾಲ್ಲೂಕು ಮಟ್ಟದ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಗ್ರಾಮಾಂತರ ಪ್ರದೇಶದಲ್ಲಿ ೩೮ ಮತ್ತು ನಗರ ಪ್ರದೇಶಗಳಲ್ಲಿ ೧೫೭ ಬಾಡಿಗೆ ಕಟ್ಟಡದಲ್ಲಿ ಅಂಗನವಾಡಿಗಳಿವೆ. ಇವುಗಳಿಗೆ ಶಾಶ್ವತ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಶಿಥಿಲಗೊಂಡಿರುವ ಸರ್ಕಾರಿ ಶಾಲೆಗಳ ಪೈಕಿ ೭ ಶಾಲೆಗಳಿಗೆ ಹೊಸ ಕಟ್ಟಡ ಮತ್ತು ಶೌಚಾಲಯ, ಶಾಲಾ ಕಾಂಪೌಂಡ್ ನಿರ್ಮಾಣಕ್ಕೂ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯ ವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೭.೪೦ ಕ್ಕೆ ><><<>